**Akashvani : Bangalore**
**Regional Bulletin In Kannada**
**22.07.2025 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**22.07.2025 / 18.40 hrs**
**<><*<><>*><>**

**ಮುಖ್ಯಾಂಶಗಳು**

**೧. ರಾಜ್ಯದಲ್ಲಿ ಕುಸುಮ್ ಬಿ ಯೋಜನೆಯಡಿಯಲ್ಲಿ ೪೦ ಸಾವಿರ ಪಂಪ್‌ಸೆಟ್‌ಗಳಿಗೆ ಸರ್ಕಾರ ಅನುಮೋದನೆ**

**೨. ರಾಜ್ಯದ ಅರಣ್ಯ ಪ್ರದೇಶದೊಳಗೆ ದನ-ಕರು, ಕುರಿ ಮೇಯಿಸುವುದಕ್ಕೆ ನಿಷೇಧ ಹೇರಿದ ಅರಣ್ಯ ಇಲಾಖೆ**

**೩. ಆರೋಗ್ಯ ಇಲಾಖೆಯಿಂದ ಗೃಹ ಆರೋಗ್ಯ ಯೋಜನೆ ಜಾರಿ ; ೧೪ ರೋಗಗಳನ್ನು ಮೂಲದಲ್ಲೇ ಪತ್ತೆ ಮಾಡುವ ಗುರಿ**

**೪. ಸಿದ್ದ ಉಡುಪು ಉದ್ಯಮಕ್ಕೆ ರಾಜ್ಯ ಸರ್ಕಾರದಿಂದ ಅಗತ್ಯ ಸಹಕಾರ -ಸಚಿವ ಶಿವಾನಂದ್ ಪಾಟೀಲ್ ಭರವಸೆ**

**೫. ಬೆಂಗಳೂರಿನ ನಾಗಸಂದ್ರದಲ್ಲಿ ಅಕ್ರಮ ಟೋಲ್ ಸಂಗ್ರಹ - ಕೇಂದ್ರ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ಹೈಕೋರ್ಟ್ ನೋಟಿಸ್**

**<><*<><>*><>**

ರಾಜ್ಯದಲ್ಲಿ ಕುಸುಮ್ ಬಿ ಯೋಜನೆಯಡಿಯಲ್ಲಿ ೪೦ ಸಾವಿರ ಪಂಪ್‌ಸೆಟ್‌ಗಳಿಗೆ ಅನುಮೋದನೆ ನೀಡಲಾಗಿದ್ದು, ಅನುಷ್ಠಾನಗೊಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಕೇಂದ್ರ ಸರ್ಕಾರ ಶೇಕಡ ೩೦ರಷ್ಟು ರಾಜ್ಯ ಸರ್ಕಾರ ಶೇಕಡ ೫೦ರಷ್ಟು ಸಬ್ಸಿಡಿ ನೀಡುತ್ತಿದ್ದು, ಫಲಾನುಭವಿಗಳು ಶೇಕಡ ೨೦ರಷ್ಟು ಭರಿಸಬೇಕು ಎಂದು ಹೇಳಿದ್ದಾರೆ. ೨೫ ಸಾವಿರ ರೈತರು ಈ ಯೋಜನೆಯಡಿ ಅರ್ಜಿ ಸಲ್ಲಿಸಿದ್ದು, ರಾಜ್ಯ ಸರ್ಕಾರ ೭೫೨ ಕೋಟಿ ರೂಪಾಯಿ ವೆಚ್ಚ ಮಾಡಲಿದೆ. ಯೋಜನೆ ಸಮರ್ಪಕ ಅನುಷ್ಠಾನಗೊಂಡ ಬಳಿಕ ಮೊತ್ತ ಕಡಿಮೆಯಾಗಲಿದೆ. ಈಗಾಗಲೇ ೪ ಲಕ್ಷ ೫ ಸಾವಿರ ಅನಧಿಕೃತ ಐಪಿ ಸೆಟ್‌ಗಳ ಪೈಕಿ ೨ ಲಕ್ಷ ಐಪಿ ಸೆಟ್ ಸಂಪರ್ಕ ಅಧಿಕೃತಗೊಳಿಸಲಾಗಿದೆ ಎಂದು ಹೇಳಿದ್ದಾರೆ.

**<><*<><>*><>**

ರಾಜ್ಯದ ಎಲ್ಲಾ ಅರಣ್ಯ ಪ್ರದೇಶದೊಳಗೆ ದನ-ಕರು, ಮೇಕೆ, ಕುರಿ ಮೇಯಿಸುವುದನ್ನು ನಿಷೇಧಿಸಲು ನಿಯಮಾನುಸಾರ ಕ್ರಮ ವಹಿಸುವಂತೆ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ಈ ಸಂಬಂಧ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಸೂಚನೆ ನೀಡಿರುವ ಅವರು, ದೊಡ್ಡ ಸಂಖ್ಯೆಯಲ್ಲಿ ಜಾನುವಾರುಗಳನ್ನು ಅರಣ್ಯ ಪ್ರದೇಶದೊಳಗೆ ಮೇಯಲು ಬಿಡುವುದರಿಂದ ಕಾಡಿನಲ್ಲಿ ಆಗಷ್ಟೇ ಮೊಳಕೆ ಒಡೆದ ಚಿಕ್ಕಪುಟ್ಟ ಸಸಿಗಳು ಬೆಳೆಯದೆ, ಅರಣ್ಯ ಸಂವರ್ಧನೆಗೆ ಅಡ್ಡಿಯಾಗುತ್ತಿದೆ ಎಂದು ಪರಿಸರಪ್ರೇಮಿಗಳು ಅಭಿಪ್ರಾಯಪಟ್ಟಿರುವುದಾಗಿ ತಿಳಿಸಿದ್ದಾರೆ. ಸಾಕು ಪ್ರಾಣಿಗಳು ಕಾಡಿನಲ್ಲಿ ಮೇಯುವುದರಿಂದ ಸಸ್ಯಹಾರಿ ಪ್ರಾಣಿಗಳಿಗೂ ಮೇವಿನ ಕೊರತೆ ಉಂಟಾಗಲಿದೆ. ಊರಿನಿಂದ ಕಾಡಿಗೆ ಮೇಯಲು ಹೋಗುವ ಪ್ರಾಣಿಗಳಿಂದ ವನ್ಯಜೀವಿಗಳು ಸಾಂಕ್ರಾಮಿಕ ರೋಗಗಳಿಗೆ ತುತ್ತಾಗುವ ಸಾಧ್ಯತೆಯೂ ಇರುತ್ತದೆ ಎಂಬ ಅಂಶವನ್ನೂ ಉಲ್ಲೇಖಿಸಿದ್ದಾರೆ. ಅರಣ್ಯ ಸಂವರ್ಧನೆಯಾಗದಿದ್ದರೆ ವನ್ಯಜೀವಿ-ಮಾನವ ಸಂಘರ್ಷ ಹೆಚ್ಚಳವಾಗಲಿದೆ. ಹೀಗಾಗಿ ಕೂಡಲೇ ಅಭಯಾರಣ್ಯಗಳಲ್ಲಿ ಮೇಕೆ, ಕುರಿ, ದನಕರುಗಳನ್ನು ಮೇಯಿಸುವುದನ್ನು ನಿಷೇಧಿಸಬೇಕು ಎಂದು ಸೂಚಿಸಿದ್ದಾರೆ.

**<><*<><>*><>**

ರೋಗಗಳ ಮೂಲವನ್ನು ಪ್ರಾಥಮಿಕ ಹಂತದಲ್ಲಿ ಪತ್ತೆ ಮಾಡಿ, ಆ ರೋಗಗಳಿಗೆ ಉತ್ತಮ ವೈದ್ಯಕೀಯ ಸೇವೆ ಒದಗಿಸುವ ಗೃಹ ಆರೋಗ್ಯ ಯೋಜನೆಯನ್ನು ರಾಜ್ಯಾದ್ಯಂತ ಜಾರಿಗೊಳಿಸಲಾಗಿದೆ ಎಂದು ಆರೋಗ್ಯ ಇಲಾಖೆಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕು ಆಸ್ಪತ್ರೆಯ ನೂತನ ಕಟ್ಟಡದ ಅಡಿಗಲ್ಲು ಸಮಾರಂಭ ನೇರವೇರಿಸಿ ಮಾತನಾಡಿದ ಅವರು, ಹದಿನಾಲ್ಕು ರೋಗಗಳನ್ನು ರೋಗದ ಮೂಲದಲ್ಲಿ ಪತ್ತೆಮಾಡುವ ಗೃಹ ಆರೋಗ್ಯ ಯೋಜನೆ ಮಹತ್ತರ ಪಾತ್ರ ವಹಿಸಲಿದೆ ಎಂದು ಹೇಳಿದ್ದಾರೆ. ಆರೋಗ್ಯ ಇಲಾಖೆಯ ಸಿಬ್ಬಂದಿ ಮನೆ ಮನೆಗೆ ತೆರಳಿ ಸಾರ್ವಜನಿಕರ ಆರೋಗ್ಯದ ಕುರಿತು ಮಾಹಿತಿ ಸಂಗ್ರಹಿಸುವ ಜೊತೆಯಲ್ಲಿ ಆರೋಗ್ಯದಲ್ಲಿ ಆಗುವ ವ್ಯತ್ಯಾಸವನ್ನು ಪ್ರಾಥಮಿಕ ಹಂತದಲ್ಲಿ ಗುರುತಿಸುವ ಕಾರ್ಯ ನಡೆಯಲಿದೆ ಎಂದು ಸಚಿವ ತಿಳಿಸಿದ್ದಾರೆ. ಒಂದು ವೇಳೆ ವೈದ್ಯಕೀಯ ಪರೀಕ್ಷೆಯಲ್ಲಿ ರೋಗ ದೃಡಪಟ್ಟರೆ, ಅಂತಹ ರೋಗಿಗಳಿಗೆ ಸರ್ಕಾರಿ ವೈದ್ಯಕೀಯ ಆಸ್ಪತ್ರೆಯಲ್ಲಿ ಉಚಿತ ಮತ್ತು ಉತ್ತಮ ವೈದ್ಯಕೀಯ ಸೇವೆ ಒದಗಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**ಧ್ವನಿ : ದಿನೇಶ ಗೂಂಡುರಾವ್, ಆರೋಗ್ಯ ಇಲಾಖೆ ಸಚಿವ ( ೩೦ ಸೆಕೆಂಡ್ಸ್)**

**<><*<><>*><>**

ರಾಜ್ಯದ ಯಾವುದೇ ಭಾಗದಲ್ಲಿ ಒಳ ಉಡುಪು ಉದ್ಯಮ ಸ್ಥಾಪನೆಗೆ ಅಗತ್ಯ ಮೂಲ ಸೌಕರ್ಯಗಳೊಂದಿಗೆ ೧೫ರಿಂದ ೨೦ ಎಕರೆ ಭೂಮಿ ಒದಗಿಸಲಾಗುವುದು ಎಂದು ಜವಳಿ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಭರವಸೆ ನೀಡಿದ್ದಾರೆ. ಗಾರ್ಮೆಂಟ್ಸ್ ಉದ್ಯಮಕ್ಕೆ ರಾಜ್ಯ ಸರ್ಕಾರ ಅಗತ್ಯ ಸಹಕಾರ ನೀಡುತ್ತಿದ್ದು, ೩ ಸಾವಿರದ ೫೦೦ ಕೋಟಿ ರೂಪಾಯಿ ಸಬ್ಸಿಡಿ ನೀಡಿದೆ. ಸಿದ್ದ ಉಡುಪು ಕ್ಷೇತ್ರದಲ್ಲಿ ಕರ್ನಾಟಕ ಮಂಚೂಣಿಯಲ್ಲಿದ್ದು, ದೇಶದ ಒಟ್ಟು ಉತ್ಪಾದನೆಯಲ್ಲಿ ರಾಜ್ಯದ ಕೊಡುಗೆ ಪ್ರತಿಶತ ೨೦ರಷ್ಟಿದೆ ಎಂದು ಹೇಳಿದ್ದಾರೆ.

**<><*<><>*><>**

ಭಾರತದ ಪ್ರಜೆಗಳಿಗೆ ಸಾಮಾಜಿಕ ಭದ್ರತೆ ಒದಗಿಸಲು ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಪ್ರಧಾನ ಮಂತ್ರಿ ಜೀವನ್ ಜ್ಯೋತಿ, ಜೀವನ್ ಭೀಮಾ, ಜೀವ ಸುರಕ್ಷಾ ಹಾಗೂ ಪ್ರಧಾನ ಮಂತ್ರಿ ಅಟಲ್ ಪೆನ್ಷನ್ ಯೋಜನೆಗಳ ಬಗ್ಗೆ ಜನರಿಗೆ ತಿಳವಳಿಕೆ ನೀಡಿ ಯೋಜನೆಯ ವ್ಯಾಪ್ತಿಗೆ ಒಳಪಡಿಸಲು ಕೊಪ್ಪಳ ಜಿಲ್ಲೆಯಲ್ಲಿ  ಭಾರತೀಯ ಸ್ಟೇಟ್ ಬ್ಯಾಂಕ್ ಹಾಗೂ ಮಾರ್ಗದರ್ಶಿ ಬ್ಯಾಂಕ್ ವ್ಯವಸ್ಥಾಪಕರ ನೇತೃತ್ವದಲ್ಲಿ ಅಭಿಯಾನಕ್ಕೆ ಇಂದು ಚಾಲನೆ ದೊರೆಯಿತು. ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ಗ್ರಾಮೀಣ ಬ್ಯಾಂಕಿನ ಕುಣಿಕೇರಿ ಶಾಖೆಯ ವ್ಯವಸ್ಥಾಪಕ ಅಲ್ಲಾಭಕ್ಷಿ ನದಾಫ್, ಬ್ಯಾಂಕ್ ಖಾತೆದಾರರಿಗೆ ಬ್ಯಾಂಕಿನಲ್ಲಿ ಸಿಗುವ ಸೌಲಭ್ಯ ಮತ್ತು ಕೇಂದ್ರ ಸರ್ಕಾರ ನೀಡುವ ಲಾಭ ಕುರಿತು ಸಾಮಾಜಿಕ ಭದ್ರತಾ ಅಭಿಯಾನ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದು ಹೇಳಿದರು.

**ಬೈಟ್:- ಅಲ್ಲಾಭಕ್ಷಿ ನದಾಫ್ ಬ್ಯಾಂಕ್ ವ್ಯವಸ್ಥಾಪಕರು ( ೨೮ ಸೆಕೆಂಡ್ಸ್)**

ಬ್ಯಾಂಕ್‌ನಲ್ಲಿ ಸಾಮಾಜಿಕ ಭದ್ರತೆ ಒದಗಿಸುವ ಯೋಜನೆಗಳ ಬಗ್ಗೆ ಮಾಹಿತಿ ದೊರೆತಿದೆ ಎಂದು ಕುಣಿಕೇರಿ ಗ್ರಾಮದ ಮಹಿಳೆ ನಿರ್ಮಲಾ ಆಕಾಶವಾಣಿಯೊಂದಿಗೆ ತಮ್ಮ ಅಭಿಪ್ರಾಯ ಹಂಚಿಕೊಂಡಿದ್ದಾರೆ.

**ಬೈಟ್:- ನಿರ್ಮಲಾ. ಫಲಾನುಭವಿ ( ೨೫ ಸೆಕೆಂಡ್ಸ್)**

ಮಂಡ್ಯ ಜಿಲ್ಲೆಯ ಮದ್ದೂರಿನಲ್ಲೂ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಹಣಕಾಸು ಯೋಜನೆಗಳ ಬಗ್ಗೆ ಮಾಹಿತಿ ನೀಡಲಾಯಿತು. ಜೊತೆಗೆ ಡಿಜಿಟಲ್ ವಂಚನೆ, ಅರಿವು, ಕುಂದುಕೊರತೆ ಪರಿಹಾರದ ಬಗ್ಗೆಯೂ ಚರ್ಚಿಸಲಾಯಿತು.

**<><*<><>*><>**

ಬೆಂಗಳೂರಿನ ಹೊರ ವಲಯದಲ್ಲಿರುವ ನಾಗಸಂದ್ರ ಟೋಲ್ ಪ್ಲಾಜಾದಲ್ಲಿ ಅಕ್ರಮ ಟೋಲ್ ಸಂಗ್ರಹದ ವಿರುದ್ಧ ಕ್ರಮ ಕೈಗೊಳ್ಳುವಂತೆ ಕೋರಿ ಸಲ್ಲಿಸಲಾದ ಸಾರ್ವಜನಿಕ ಹಿತಾಸಕ್ತಿ ಅರ್ಜಿಗೆ ಸಂಬಂಧಿಸಿದಂತೆ ಹೈಕೋರ್ಟ್ ಕೇಂದ್ರ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ನೋಟಿಸ್ ಜಾರಿ ಮಾಡಿದೆ. ಮುಖ್ಯ ನ್ಯಾಯಮೂರ್ತಿ ವಿಭುಬಖ್ರು ಮತ್ತು ನ್ಯಾಯಮೂರ್ತಿ ಸಿಎಂ ಜೋಶಿ ಅವರನ್ನೊಳಗೊಂಡ ವಿಭಾಗೀಯ ಪೀಠ ಸೆಪ್ಟೆಂಬರ್ ೧೭ಕ್ಕೆ ವಿಚಾರಣೆಯನ್ನು ಮುಂದೂಡಿದೆ. ಒಪ್ಪಂದದ ಅವಧಿ ಮುಗಿದಿದ್ದರೂ ಪ್ರತಿದಿನ ಲಕ್ಷಾಂತರ ರೂಪಾಯಿ ಸಂಗ್ರಹಿಸಲಾಗುತ್ತಿದೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ.

<><*<><>*><>

ದೌರ್ಜನ್ಯಕ್ಕೊಳಗಾದ ಮಹಿಳೆಯರು ಮತ್ತು ಮಕ್ಕಳ ನೆರವಿಗಾಗಿ ಕಾರ್ಯನಿರ್ವಹಿಸುತ್ತಿರುವ ಸಹಾಯವಾಣಿ ೧-೦-೯-೮, ೧೧೨ ಮತ್ತು ೧೮೧ರ ಬಗ್ಗೆ ಹೆಚ್ಚಿನ ಪ್ರಚಾರ ಮಾಡಬೇಕು ಎಂದು ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಚೌಧರಿ ಸೂಚನೆ ನೀಡಿದ್ದಾರೆ. ಪಾವಗಡ ತಾಲ್ಲೂಕಿನಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಅಂಗನವಾಡಿಗಳಲ್ಲಿ ದೊರೆಯುವ ಸೌಲಭ್ಯಗಳನ್ನು ಮಹಿಳೆಯರಿಗೆ ತಲುಪಿಸಬೇಕು. ಮಹಿಳೆಯರು ದೌರ್ಜನ್ಯಕ್ಕೆ ಒಳಗಾದ ಸಂದರ್ಭದಲ್ಲಿ  ಮಹಿಳಾ ಸಾಂತ್ವಾನ ಕೇಂದ್ರಗಳ ನೆರವು ಪಡೆದುಕೊಳ್ಳಬೇಕು ಎಂದು ತಿಳಿಸಿದ್ದಾರೆ. ಸೀನಪ್ಪನಹಳ್ಳಿ ಜನತಾ ಕಾಲೋನಿಯಲ್ಲಿ ಕೂಡಲೇ ಸದರಿ ಕುಟುಂಬಗಳಿಗೆ ನಿವೇಶನ ಮಂಜೂರು ಮಾಡಿ ಆಶ್ರಯ ಮನೆ ನಿರ್ಮಾಣಕ್ಕೆ ಅಗತ್ಯ ಕ್ರಮ ವಹಿಸುವಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಕಂದಾಯ ಇಲಾಖಾ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>